# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | **ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **340** |
| ಉತ್ತರಿಸಬೇಕಾದ ದಿನಾಂಕ | : | 13.08.2025 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಸತಿ ಇಲಾಖೆಯಲ್ಲಿ ಮನೆ ಮಂಜೂರಾತಿ ಸಲುವಾಗಿ ಕಮಿಷನ್ ನೀಡಬೇಕೆನ್ನುವ ಆರೋಪ ಕೇಳಿಬಂದಿರುವುದು ಹಾಗೂ ವ್ಯಾಪಕ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2024-25ನೇ ಸಾಲಿಗೆ ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಮಂಜೂರಾದ 950 ಮನೆಗಳ ಹಂಚಿಕೆಯಲ್ಲಿ ಭ್ರಷ್ಟಾಚಾರ ನಡೆದಿದೇ ಎಂದು ಕೆಲ ದೃಶ್ಯ ಮಾಧ್ಯಮ ಹಾಗೂ ದಿನ ಪತ್ರಿಕೆಗಳಲ್ಲಿ ಪ್ರಕಟ/ಬಿತ್ತರಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಈ ಆರೋಪಗಳ ಬಗ್ಗೆ ಸರ್ಕಾರ ತನಿಖೆ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದೇ; | ಈ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಕಲಬುರಗಿ ಜಿಲ್ಲೆ ಇವರಿಗೆ ಸೂಚಿಸಲಾಗಿರುತ್ತದೆ<br><br>ವರದಿಯಲ್ಲಿ ನ್ಯೂನತೆ/ ಭ್ರಷ್ಟಾಚಾರ ನಡೆದಿರುವುದು ಕಂಡು ಬಂದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು. |
| ಇ) | ನಿರ್ಮಾಣ ಪೂರ್ಣಗೊಂಡಿರುವ ವಸತಿ ಮನೆಗಳನ್ನು ಹಂಚಿಕೆ ಮಾಡದಿರಲು ಕಾರಣಗಳೇನು; ಯಾವ ಕಾಲಮಿತಿಯೊಳಗೆ ಈ ಮನೆಗಳನ್ನು ಹಂಚಿಕೆ ಮಾಡಲಾಗುವುದು? | ಸರ್ಕಾರದ ಮನೆ ಮಾರ್ಗಸೂಚಿಯನ್ವಯ ಕಾಮಗಾರಿ ಆದೇಶ ನೀಡಿದ 90 ದಿನಗಳೊಳಗಾಗಿ ಫಲಾನುಭವಿಯು ಮನೆಯ ಕಾಮಗಾರಿಯನ್ನು ಪ್ರಾರಂಭಿಸಬೇಕಿದ್ದು, ಒಂದು ವರ್ಷದೊಳಗಾಗಿ ಮನೆಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ. ಮನೆಗಳ ನಿರ್ಮಾಣವನ್ನು ಫಲಾನುಭವಿಗಳೇ ಸ್ವತಃ ನಿರ್ಮಿಸಿಕೊಳ್ಳುತ್ತಿದ್ದು, ನಿರ್ಮಾಣ ಹಂತದಲ್ಲಿರುವ ಮನೆಗಳ ಫಲಾನುಭವಿಗಳಿಗೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ನಗರ ಸ್ಥಳೀಯ ಅಧಿಕಾರಿಗಳ ಮುಖಾಂತರ ತಿಳುವಳಿಕೆ ಪತ್ರಗಳನ್ನು ನೀಡಿ ಹಾಗೂ ನೋಟೀಸ್ ಜಾರಿ ಮಾಡಿ ಶೀಘ್ರವಾಗಿ ಮನೆಗಳನ್ನು ನಿರ್ಮಿಸಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ವಇ 325 ಹೆಚ್ಎಎಂ 2025

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು